ಜೆಎಸ್‌ಎಸ್ ಮಹಾವಿದ್ಯಾಪೀಠ

**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಭಾರತ ಸರ್ಕಾರದ ಡಿಬಿಟಿಯಿಂದ "ಸ್ಟಾರ್ ಕಾಲೇಜ್ ಸ್ಕೀಮ್" ಅಡಿಯಲ್ಲಿ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ

ESTD - 1964

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 20–12–2014

## <u>ಪ್ರಕಟಣೆಯ ಕೃಪೆಗಾಗಿ</u>

# ಮೌಲ್ಯಾಧಾರಿತ ಜೀವನಕ್ಕೆ ಕ್ರೀಡೆ ಮುಖ್ಯ

– ಶ್ರೀ ಜಿ. ಬೆನಕ ಪ್ರಸಾದ್

ದಿನಾಂಕ: 20–12–2014ರಂದು ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ವಾರ್ಷಿಕ ಕ್ರೀಡಾ ಕೂಟ ಉದ್ಘಾಟನಾ ಸಮಾರಂಭ ನೆರವೇರಿತು. ಕಾರ್ಯಕ್ರಮದ ಉದ್ಘಾಟಕರಾಗಿ ಮೈಸೂರು ವಿಶ್ವವಿದ್ಯಾನಿಲಯದ ಭಾರತೀಯ ಕ್ರೀಡಾ ಪ್ರಾಧಿಕಾರದ ಅಥ್ಲೆಟಿಕ್ ತರಬೇತುದಾರರಾಗಿರುವ ಶ್ರೀ ಜಿ. ಬೆನಕ ಪ್ರಸಾದ್‌ರವರು ಆಗಮಿಸಿದ್ದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶ್ರೀ ಬೆನಕ ಪ್ರಸಾದ್‌ರವರು ವಿವಿಧ ಕ್ರೀಡಾ ಪುಟುಗಳನ್ನು ಉದ್ದೇಶಿಸಿ ಮಾತನಾಡಿದರು. ಭಾರತವು ಇಂದು ಕ್ರೀಡಾ ಕ್ಷೇತ್ರದಲ್ಲಿ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುವ ರೀತಿಯಲ್ಲಿ ಸಾಧನೆಗಳನ್ನು ಮಾಡುತ್ತಿದೆ. ವಿವಿಧ ಕ್ರೀಡೆಗಳಲ್ಲಿ ಹೆಚ್ಚು ಹೆಚ್ಚು ಆಸಕ್ತ ಕ್ರೀಡಾಪುಟುಗಳು ಮುಂದೆ ಬರುತ್ತಿದ್ದಾರೆ. ಇಂಜಿನಿಯರಿಂಗ್, ವೈದ್ಯಾಕೀಯ ಮುಂತಾದ ಕ್ಷೇತ್ರದ ವಿದ್ಯಾರ್ಥಿಗಳು ಕೂಡ ಇಂದು ಕ್ರೀಡಾ ಕ್ಷೇತ್ರದಲ್ಲಿ ಸಾಧನೆಯನ್ನು ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಬೇಕು. ಇಂದಿನ ಸ್ಪರ್ಧಾತ್ಮಕ ಬದುಕಿನಲ್ಲಿ ಕ್ರೀಡಾ ಕ್ಷೇತ್ರ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸವನ್ನು ಮತ್ತು ನಾಯಕತ್ವದ ಗುಣವನ್ನು ಬೆಳಸುತ್ತದೆ ಎಂದು ಹೇಳಿ ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರೆನೀಡಿ ಹಾರೈಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಮುಖ್ಯಕಾರ್ಯನಿರ್ವಾಹಕರಾದ ಪ್ರೊ.ಬಿ.ವಿ.ಸಾಂಬಶಿವಯ್ಯನವರು ಮಾತನಾಡಿ ಕಾಲೇಜು ಸ್ಥಾಪನೆಯಾದ ವರ್ಷದಿಂದ ಇಲ್ಲಿಯವರೆಗೂ ಕಾಲೇಜಿನ ಕ್ರೀಡಾ ವಿಭಾಗ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಉತ್ತಮ ಕ್ರೀಡಾಪುಟುಗಳನ್ನು ಬೆಳಕಿಗೆ ತರುತ್ತಿದೆ ಹಾಗೂ ರಾಜ್ಯ ಮಟ್ಟದ ಕ್ರೀಡೆಗಳಲ್ಲಿ ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ಬಹುಮಾನಗಳನ್ನು ಪಡೆಯುತ್ತಿದ್ದಾರೆ ಎಂದರು. ವಿದ್ಯಾರ್ಥಿಗಳು ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾ ಆಸಕ್ತಿಯನ್ನು ಬೆಳಸಿಕೊಂಡು ಸಕ್ರಿಯವಾಗಿ ಭಾಗವಹಿಸಬೇಕೆಂದು ತಿಳಿಸಿದರು.

ಸಮಾರಂಭದಲ್ಲಿ ಅಕಾಡೆಮಿಕ್ ಡೀನ್ ಆಗಿರುವ ಪ್ರೊ.ಎಂ. ಮಹದೇವಪ್ಪ, ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಸ್. ಸೋಮಶೇಖರ ಅವರು ಉಪಸ್ಥಿತರಿದ್ದರು. ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಂ.ಬಿ. ಮಲ್ಲಿಕಾರ್ಜುನ ಪಂಡಿತ್ ಅವರು ಅತಿಥಿಗಳನ್ನು ಪರಿಚಯಿಸಿ ಎಲ್ಲರನ್ನು ಸ್ವಾಗತಿಸಿದರು. ವಿದ್ಯಾರ್ಥಿನಿ ಕು.ಸಿಂಚನಾ ಪ್ರಾರ್ಥಿಸಿದರು. ಭೌತಶಾಸ್ತ್ರ ವಿಭಾಗದ ಶ್ರೀ ಎಲ್. ವಿನಯ್ ಕುಮಾರ್ ಕಾರ್ಯಕ್ರಮವನ್ನು ನಿರೂಪಿಸಿದರು. ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ.ಎಂ.ಎನ್. ವೆಂಕಟರಾವ್ ವಂದಿಸಿದರು.

M B Malla

(ಎಂ.ಬಿ. ಮಲ್ಲಿಕಾರ್ಜುನ ಪಂಡಿತ್)

**ಪ್ರಾಂಶುಪಾಲರು**

ಜೆಎಸ್‌ಎಸ್ ... ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು–570 025

ಜೆಎಸ್‌ಎಸ್ ಮಹಾವಿದ್ಯಾಪೀಠ
# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಭಾರತ ಸರ್ಕಾರದ ಡಿಬಿಟಿಯಿಂದ "ಸ್ಟಾರ್ ಕಾಲೇಜ್ ಸ್ಕೀಮ್" ಅಡಿಯಲ್ಲಿ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ
ESTD - 1964
☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 20–12–2014

## ಪ್ರಕಟಣೆಯ ಕೃಪೆಗಾಗಿ

## ಮೌಲ್ಯಾಧಾರಿತ ಜೀವನಕ್ಕೆ ಕ್ರೀಡೆ ಮುಖ್ಯ

– ಶ್ರೀ ಜಿ. ಬೆನಕ ಪ್ರಸಾದ್

ದಿನಾಂಕ: 20–12–2014ರಂದು ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ವಾರ್ಷಿಕ ಕ್ರೀಡಾ ಕೂಟ ಉದ್ಘಾಟನಾ ಸಮಾರಂಭ ನೆರವೇರಿತು. ಕಾರ್ಯಕ್ರಮದ ಉದ್ಘಾಟಕರಾಗಿ ಮೈಸೂರು ವಿಶ್ವವಿದ್ಯಾನಿಲಯದ ಭಾರತೀಯ ಕ್ರೀಡಾ ಪ್ರಾಧಿಕಾರದ ಅಥ್ಲೆಟಿಕ್ ತರಬೇತುದಾರರಾಗಿರುವ ಶ್ರೀ ಜಿ. ಬೆನಕ ಪ್ರಸಾದ್‌ರವರು ಆಗಮಿಸಿದ್ದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶ್ರೀ ಬೆನಕ ಪ್ರಸಾದ್‌ರವರು ವಿವಿಧ ಕ್ರೀಡಾ ಪಟುಗಳನ್ನು ಉದ್ದೇಶಿಸಿ ಮಾತನಾಡಿದರು. ಭಾರತವು ಇಂದು ಕ್ರೀಡಾ ಕ್ಷೇತ್ರದಲ್ಲಿ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುವ ರೀತಿಯಲ್ಲಿ ಸಾಧನೆಗಳನ್ನು ಮಾಡುತ್ತಿದೆ. ವಿವಿಧ ಕ್ರೀಡೆಗಳಲ್ಲಿ ಹೆಚ್ಚು ಹೆಚ್ಚು ಆಸಕ್ತ ಕ್ರೀಡಾಪಟುಗಳು ಮುಂದೆ ಬರುತ್ತಿದ್ದಾರೆ. ಇಂಜಿನಿಯರಿಂಗ್, ವೈದ್ಯಕೀಯ ಮುಂತಾದ ಕ್ಷೇತ್ರದ ವಿದ್ಯಾರ್ಥಿಗಳು ಕೂಡ ಇಂದು ಕ್ರೀಡಾ ಕ್ಷೇತ್ರದಲ್ಲಿ ಸಾಧನೆಯನ್ನು ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಬೇಕು. ಇಂದಿನ ಸ್ಪರ್ಧಾತ್ಮಕ ಬದುಕಿನಲ್ಲಿ ಕ್ರೀಡಾ ಕ್ಷೇತ್ರ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸವನ್ನು ಮತ್ತು ನಾಯಕತ್ವದ ಗುಣವನ್ನು ಬೆಳಸುತ್ತದೆ ಎಂದು ಹೇಳಿ ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರೆನೀಡಿ ಹಾರೈಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಮುಖ್ಯಕಾರ್ಯನಿರ್ವಾಹಕರಾದ ಪ್ರೊ.ಬಿ.ವಿ.ಸಾಂಬಶಿವಯ್ಯನವರು ಮಾತನಾಡಿ ಕಾಲೇಜು ಸ್ಥಾಪನೆಯಾದ ವರ್ಷದಿಂದ ಇಲ್ಲಿಯವರೆಗೂ ಕಾಲೇಜಿನ ಕ್ರೀಡಾ ವಿಭಾಗ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಉತ್ತಮ ಕ್ರೀಡಾಪುಟುಗಳನ್ನು ಬೆಳಕಿಗೆ ತರುತ್ತಿದೆ ಹಾಗೂ ರಾಜ್ಯ ಮಟ್ಟದ ಕ್ರೀಡೆಗಳಲ್ಲಿ ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ಬಹುಮಾನಗಳನ್ನು ಪಡೆಯುತ್ತಿದ್ದಾರೆ ಎಂದರು. ವಿದ್ಯಾರ್ಥಿಗಳು ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾ ಆಸಕ್ತಿಯನ್ನು ಬೆಳಸಿಕೊಂಡು ಸಕ್ರಿಯವಾಗಿ ಭಾಗವಹಿಸಬೇಕೆಂದು ತಿಳಿಸಿದರು.

ಸಮಾರಂಭದಲ್ಲಿ ಅಕಾಡೆಮಿಕ್ ಡೀನ್ ಆಗಿರುವ ಪ್ರೊ.ಎಂ. ಮಹದೇವಪ್ಪ, ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಸ್. ಸೋಮಶೇಖರ ಅವರು ಉಪಸ್ಥಿತರಿದ್ದರು. ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಂ.ಬಿ. ಮಲ್ಲಿಕಾರ್ಜುನ ಪಂಡಿತ್ ಅವರು ಅತಿಥಿಗಳನ್ನು ಪರಿಚಯಿಸಿ ಎಲ್ಲರನ್ನು ಸ್ವಾಗತಿಸಿದರು. ವಿದ್ಯಾರ್ಥಿನಿ ಕು.ಸಿಂಚನಾ ಪ್ರಾರ್ಥಿಸಿದರು. ಭೌತಶಾಸ್ತ್ರ ವಿಭಾಗದ ಶ್ರೀ ಎಲ್. ವಿನಯ್ ಕುಮಾರ್ ಕಾರ್ಯಕ್ರಮವನ್ನು ನಿರೂಪಿಸಿದರು. ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ.ಎಂ.ಎನ್. ವೆಂಕಟರಾವ್ ವಂದಿಸಿದರು.

(ಎಂ.ಬಿ. ಮಲ್ಲಿಕಾರ್ಜುನ ಪಂಡಿತ್)

ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025